ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು**

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ದ್ವಿತೀಯ ದರ್ಜೆ ಬೆರಳಚ್ಚುಗಾರರುಗಳಿಗೆ ಹಿರಿಯ ಬೆರಳಚ್ಚುಗಾರರ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ದಿನಾಂಕ : 27.02.2019 ಹಾಗೂ ದಿನಾಂಕ : 15.05.2019ರ ಸಂಖ್ಯೆ : ಸಿಆಸುಇ/186/ಎಸ್‌ಆರ್‌ಎಸ್/2018ರ ಆದೇಶಗಳು.
2. ಈ ಕಛೇರಿಯ ದಿನಾಂಕ : 26.08.2019ರ ಸಂಖ್ಯೆ : ಕಾಶಿಇ/32/ ಶೀಲಿ/ಹಿಬೆ/ಬೆ/ಜೇಪ/ಬಸ್ಥಾವಿ/2019-20 ರ ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ ದ್ವಿತೀಯ ದರ್ಜೆ ಬೆರಳಚ್ಚುಗಾರರುಗಳ ಅಂತಿಮ ಜ್ಯೇಷ್ಠತಾ ಪಟ್ಟಿ.
3. ದಿನಾಂಕ: 23.02.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
4. ದಿನಾಂಕ : 04.03.2021 ರ ರ ಸಮಸಂಖ್ಯೆಯ ಜ್ಞಾಪನ.

*****

**ಪ್ರಸ್ತಾವನೆ:**

ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಹಿರಿಯ ಬೆರಳಚ್ಚುಗಾರರ ಹುದ್ದೆಗಳಿಗೆ ದ್ವಿತೀಯ ದರ್ಜೆ ಬೆರಳಚ್ಚುಗಾರರ ಹುದ್ದೆಯಿಂದ ಶೇಕಡ 100ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ (2)ರ ಪತ್ರದೊಂದಿಗೆ ಪ್ರಕಟಿಸಿರುವ ಈ ಇಲಾಖೆಯ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ ದ್ವಿತೀಯ ದರ್ಜೆ ಬೆರಳಚ್ಚುಗಾರರುಗಳ ಅಂತಿಮ ಜ್ಯೇಷ್ಠತಾ ಪಟ್ಟಿಯ ಆಧಾರದ ಮೇಲೆ ಹಿರಿಯ ಬೆರಳಚ್ಚುಗಾರರ ವೃಂದದ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ: 23.02.2021ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿ ಇರುವ ಹಿರಿಯ ಬೆರಳಚ್ಚುಗಾರರ ಹುದ್ದೆಗಳನ್ನು ಜ್ಯೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ ದ್ವಿತೀಯ ದರ್ಜೆ ಬೆರಳಚ್ಚುಗಾರರುಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಯಿತು.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ದ್ವಿತೀಯ ದರ್ಜೆ ಬೆರಳಚ್ಚುಗಾರರ ವೃಂದದಿಂದ ಹಿರಿಯ ಬೆರಳಚ್ಚುಗಾರರ ವೃಂದಕ್ಕೆ ಬಡ್ತಿ ಹೊಂದಲು ಅರ್ಹರಿರುವ ದ್ವಿತೀಯ ದರ್ಜೆ ಬೆರಳಚ್ಚುಗಾರರು ಸ್ಥಳ ಆಯ್ಕೆ ಮಾಡಿಕೊಳ್ಳಲು ಉಲ್ಲೇಖ (4)ರ ಜ್ಞಾಪನದಲ್ಲಿ ದಿನಾಂಕ: 06.03.2021ರಂದು ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಚಿಸಲಾಗಿತ್ತು. ಅದರಂತೆ, ದಿನಾಂಕ: 06.03.2021ರಂದು ಸ್ಥಳ ಆಯ್ಕೆಗಾಗಿ ನಡೆಸಿದ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡಿರುವ ಅರ್ಹ ದ್ವಿತೀಯ ದರ್ಜೆ ಬೆರಳಚ್ಚುಗಾರರುಗಳಿಗೆ ಹಿರಿಯ ಬೆರಳಚ್ಚುಗಾರರಾಗಿ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ:ಕಾಶಿಇ/132/ಹಿ.ಬೆ/ಬಡ್ತಿ/ಬಸ್ಥಾವಿ/2019-20 ಬೆಂಗಳೂರು, ದಿನಾಂಕ:10.03.2021**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ದ್ವಿತೀಯ ದರ್ಜೆ ಬೆರಳಚ್ಚುಗಾರರುಗಳಿಗೆ ವೇತನ ಶ್ರೇಣಿ *ರೂ. 27650-650-29600-750-32600-850-36000-950-39800-1100-*

46400-1250-52650 ರಲ್ಲಿ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಹಿರಿಯ ಬೆರಳಚ್ಚುಗಾರರ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡಿ ಅವರುಗಳ ಹೆಸರಿನ ಮುಂದೆ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಖಾಲಿ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

## ರಾಜ್ಯವ್ಯಾಪಿ ಉಳಿಕೆ ಮೂಲ ವೃಂದ (ಆರ್.ಕೆ.)

| ಕ್ರ. ಸಂ | ಹೆಸರು ಶ್ರೀ/ಶ್ರೀಮತಿ | ಕಾರ್ಯ ನಿರ್ವಹಿಸುತ್ತಿರುವ ಕಛೇರಿ/ಕಾಲೇಜು | ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ/ಕಾಲೇಜು | ಷರಾ |
|---|---|---|---|---|
| 1 | ಪ್ರೇಮಕುಮಾರಿ.ವಿ. | ಸರ್ಕಾರಿ ವಿಜ್ಞಾನ ಕಾಲೇಜು, ಬೆಂಗಳೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿಜಯನಗರ, ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 2 | ಕನಕಲಕ್ಷ್ಮಿ ವಿ | ಕೇಂದ್ರ ಕಛೇರಿ, ಬೆಂಗಳೂರು. | ಕೇಂದ್ರ ಕಛೇರಿ, ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 3 | ಬಿ.ಟಿ.ರವಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸೋಮವಾರಪೇಟೆ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಿರಿಯಾಪಟ್ಟಣ. | ಖಾಲಿ ಹುದ್ದೆಗೆ ಎದುರಾಗಿ |
| 4 | ರೂಪಶ್ರೀ.ಜಿ.ಕೆ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಳ್ಳಕೆರೆ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಿರಾ. | ಖಾಲಿ ಹುದ್ದೆಗೆ ಎದುರಾಗಿ |
| 5 | ಅಂಜಲೀನಾ ಜೂಜೆ ಡಿಸೋಜಾ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಿರಸಿ (ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅಂಕೋಲಾ-ನಿಯೋಜನೆ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಂಕಾಪುರ. | ಖಾಲಿ ಹುದ್ದೆಗೆ ಎದುರಾಗಿ |
| 6 | ಯಶೋಧ ಜಿ ಬಂದರಗಲ್ಲ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾದಾಮಿ | ಕೇಂದ್ರ ಕಛೇರಿ, ಬೆಂಗಳೂರು | ಖಾಲಿ ಹುದ್ದೆಗೆ ಎದುರಾಗಿ |
| 7 | ಮಂಜುಳ.ಆರ್. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪೀಣ್ಯ, ಬೆಂಗಳೂರು | ಕೇಂದ್ರಕಛೇರಿ, ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 8 | ಹೇಮ ತುಂಬರಮಟ್ಟಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮುಧೋಳ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಯರಗಟ್ಟಿ(ಸವದತ್ತಿ) | ಖಾಲಿ ಹುದ್ದೆಗೆ ಎದುರಾಗಿ |
| 9 | ಭಾಗ್ಯಲಕ್ಷ್ಮಿ ಧರ್ಮಣ್ಣನವರ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೆರೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಖಾನಾಪುರ | ಖಾಲಿ ಹುದ್ದೆಗೆ ಎದುರಾಗಿ |
| 10 | ನಾಗರೇಖ ಸಿ.ಎನ್. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊಳೆನರಸೀಪುರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊಣನೂರು | ಖಾಲಿ ಹುದ್ದೆಗೆ ಎದುರಾಗಿ |

1. ಕೇಂದ್ರ ಕಛೇರಿ, ಪ್ರಾದೇಶಿಕ ಕಛೇರಿ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಂಬಂಧಪಟ್ಟವರು ಈ ಆದೇಶವನ್ನು ವೆಬ್‌ಸೈಟ್‌ನಿಂದ ಪಡೆದು ಬಡ್ತಿ ಹೊಂದಿದವರನ್ನು ಬಿಡುಗಡೆಗೊಳಿಸತಕ್ಕದ್ದು.

2. ಬಡ್ತಿ ಹೊಂದಿದವರು ಸ್ಥಳನಿಯುಕ್ತಿಗೊಳಿಸಲಾದ ಕಛೇರಿ/ಕಾಲೇಜಿನಲ್ಲಿ ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯನ್ನು ರದ್ದಾಗುತ್ತದೆ. ಬಡ್ತಿಗೊಂಡ ನೌಕರರು ನಿಯಮಾನುಸಾರ ಸೇರುವಿಕೆ ಕಾಲ ಪಡೆಯಲು ಅರ್ಹರಿರುತ್ತಾರೆ.

3. ಬಡ್ತಿ ಹೊಂದಿರುವ ದ್ವಿತೀಯ ದರ್ಜೆ ಬೆರಳಚ್ಚುಗಾರರುಗಳ ಪೈಕಿ ಯಾರಾದರೂ ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಆಯುಕ್ತರು

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1) ಕೇಂದ್ರ ಕಛೇರಿ / ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ/ ಮೇಲ್ಕಂಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ -ಮಾಹಿತಿ ಹಾಗೂ ಮುಂದಿನ ಅಗತ್ಯಕ್ರಮಕ್ಕಾಗಿ.
2) ಮೇಲ್ಕಂಡ ಹಿರಿಯ ಬೆರಳಚ್ಚುಗಾರರುಗಳಿಗೆ (ಸಂಬಂಧಪಟ್ಟ ಮೇಲಾಧಿಕಾರಿ/ಪ್ರಾಂಶುಪಾಲರು ಮೂಲಕ)
3) ಮ್ಯಾನೇಜರ್/ಅಧೀಕ್ಷಕರು, ಸೇವಾ ವಿಭಾಗ/ವರ್ಗಾವಣೆ & ನಿಯೋಜನೆ ವಿಭಾಗ ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4) ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಆದೇಶವನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು/ಎಲ್ಲಾ ವಿಭಾಗಗಳ ಅಧೀಕ್ಷಕರುಗಳು – ಮಾಹಿತಿಗಾಗಿ.